# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 135
2. ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರಕಾಶ ಕೆ. ರಾಥೋಡ್ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 05.12.2023
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿ ಎಷ್ಟು ಸಹಕಾರ ಸಕ್ಕರೆ ಕಾರ್ಖಾನೆಗಳು ಲಾಭದಲ್ಲಿವೆ; (ವಿವರ ನೀಡುವುದು)</td><td>ರಾಜ್ಯದಲ್ಲಿ ಪ್ರಸ್ತುತ 13 ಸಹಕಾರಿ ಸಕ್ಕರೆ ಕಾರ್ಖಾನೆಗಳು ಕಾರ್ಯನಿರತವಾಗಿದ್ದು, ಈ ಪೈಕಿ ಬಹುತೇಕ ಸಹಕಾರಿ ಸಕ್ಕರೆ ಕಾರ್ಖಾನೆಗಳು ನಷ್ಟದಲ್ಲಿರುತ್ತವೆ. ವಿವರಗಳನ್ನು ಅನುಬಂಧ ದಲ್ಲಿ ಒದಗಿಸಲಾಗಿದೆ.</td></tr>
<tr><td>(ಆ)</td><td>ಸಹಕಾರ ಸಕ್ಕರೆ ಕಾರ್ಖಾನೆಗಳಲ್ಲಿ ಸಕ್ಕರೆಯನ್ನು ಹೊರತುಪಡಿಸಿ ಯಾವ ಯಾವ ಉತ್ಪನ್ನಗಳನ್ನು ತಯಾರಿಸಲಾಗುತ್ತದೆ;</td><td>ಸಹಕಾರಿ ಸಕ್ಕರೆ ಕಾರ್ಖಾನೆಗಳಲ್ಲಿ ಸಕ್ಕರೆಯನ್ನು ಹೊರತುಪಡಿಸಿ ಪ್ರಾಥಮಿಕ ಉತ್ಪನ್ನಗಳಾದ ಮೊಲಾಸಿಸ್, ಬಗಾಸ್,ಮತ್ತು ಪ್ರೆಸ್‌ಮಡಗಳನ್ನು ಉತ್ಪಾದಿಸಲಾಗುತ್ತದೆ. ಇದಲ್ಲದೆ, ಇತರೆ ಉತ್ಪನ್ನಗಳಾದ ಸಹ ವಿದ್ಯುತ್‌ಗಳನ್ನು ಹಾಗೂ ಡಿಸ್ಟಿಲರಿ / ಎಥನಾಲ್ ಉತ್ಪನ್ನಗಳನ್ನು ಉತ್ಪಾದಿಸಲಾಗುತ್ತದೆ.</td></tr>
<tr><td>(ಇ)</td><td>ಸಹಕಾರ ಸಕ್ಕರೆ ಕಾರ್ಖಾನೆಗಳಲ್ಲಿ ಎಥನಾಲ್ ಘಟಕಗಳನ್ನು ಸ್ಥಾಪಿಸಲು ಯಾವ ಯೋಜನೆ ಹಮ್ಮಿಕೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು)</td><td>ಎಥನಾಲ್ ಉತ್ಪಾದನೆಯಲ್ಲಿ ತೊಡಗಿರುವ ಉದ್ದಿಮೆಗಳನ್ನು ಪ್ರೋತ್ಸಾಹಿಸಲು ಕೇಂದ್ರ ಸರ್ಕಾರವು ಬಡ್ಡಿ ವಿನಾಯಿತಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ. ಈ ಯೋಜನೆಯಡಿಯಲ್ಲಿ ಶೇ.6 ಬಡ್ಡಿ ಅಥವಾ ಶೇ.50 ರಷ್ಟು ಸಾಲದ ಮೇಲಿನ ಬಡ್ಡಿ ಮೊತ್ತದಲ್ಲಿ ಯಾವುದು ಕಡಿಮೆಯೋ ಅದನ್ನು ಆರ್ಥಿಕ ನೆರವು / ಸಹಾಯವಾಗಿ ನೀಡಲಾಗುತ್ತದೆ. ಮುಂದುವರೆದು, ಸಕ್ಕರೆ ಕಾರ್ಖಾನೆಗಳಲ್ಲಿ ವಿವಿಧ ಮೂಲಗಳಿಂದ ಉತ್ಪಾದಿಸುವ ಎಥನಾಲ್‌ಗೆ ಕೇಂದ್ರ ಸರ್ಕಾರವು ಈ ಕೆಳಕಂಡಂತೆ ಲಾಭದಾಯಕ ಬೆಲೆಯನ್ನು ನಿಗದಿಪಡಿಸಿರುತ್ತದೆ.
<table>
<tr><th>ಕ್ರ. ಸಂ</th><th>ವಿವರ</th><th>ಪ್ರತಿ ಲೀ. ಒಂದಕ್ಕೆ ನಿಗದಿಪಡಿಸಿರುವ ಮೊತ್ತ (ರೂ.ಗಳಲ್ಲಿ)</th></tr>
<tr><td>1</td><td>ಕಬ್ಬಿನ ರಸದಿಂದ</td><td>65.61</td></tr>
<tr><td>2</td><td>ಬಿ-ಹೆವಿ ಮೊಲಾಸಿಸ್‌ನಿಂದ</td><td>60.73</td></tr>
<tr><td>3</td><td>ಸಿ-ಹೆವಿ ಮೊಲಾಸಿಸ್‌ನಿಂದ</td><td>49.41</td></tr>
<tr><td>4</td><td>ಎಫ್.ಸಿ.ಐ ನಿಂದ ಲಭ್ಯವಾಗುವ ಹೆಚ್ಚುವರಿ ಅಕ್ಕಿಯಿಂದ</td><td>58.50</td></tr>
<tr><td>5</td><td>ಹಾನಿಯಾದ ಆಹಾರ ಧಾನ್ಯಗಳಿಂದ</td><td>55.54</td></tr>
<tr><td>6</td><td>ಮೆಕ್ಕೆಜೋಳದಿಂದ</td><td>56.35</td></tr>
</table>
ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗಳು ಮತ್ತು ಎಥನಾಲ್ ಘಟಕಗಳ ಸ್ಥಾಪನೆಯ ಸಂಬಂಧ ಹೊಸ ನೀತಿಯನ್ನು ರೂಪಿಸುವ ಕುರಿತು ಪರಿಶೀಲಿಸಲು ಸರ್ಕಾರದ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ (ಎಂ.ಎಸ್.ಎಂ.ಇ ಮತ್ತು ಗಣಿ) ಇವರ ಅಧ್ಯಕ್ಷತೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಸಿಐ 184 ಎಸ್‌ಜಿಎಫ್ 2022, ದಿನಾಂಕ:25.08.2023ರಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ</td></tr>
</table>

ಸಂಖ್ಯೆ: ಸಿಐ 329 ಸಿಓಎಫ್ 2023

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು